ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ: ಸಿ7(8)/ಆರ್.ಟಿ.ಇ/ಎಜಿ ಆಡಿಟ್ 2015-16/2019-20 ದಿನಾಂಕ: 27-07-2020

ಜ್ಞಾಪನ

ವಿಷಯ : ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ಯಾವುದೇಭೂಮಿಯನ್ನು, ಕಟ್ಟಡವನ್ನು, ಸಾಧನ ಸಾಮಾಗ್ರಿಯನ್ನು ಅಥವಾ ಇತರ ಸೌಲಭ್ಯಗಳನ್ನು ಪಡೆದ ಶಾಲೆಗಳಿಗೆ ಶಿಕ್ಷಣ ಹಕ್ಕು ಕಾಯ್ದೆಯಡಿ ಪ್ರವೇಶ ಪಡೆದ ಮಕ್ಕಳ ಶುಲ್ಕ ಮರುಪಾವತಿಯ ಬಗ್ಗೆ.

ಉಲ್ಲೇಖ : ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 29-05-2020

&&&&&&

ಉಲ್ಲೇಖಿತ ಸುತ್ತೋಲೆಯಲ್ಲಿ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ಯಾವುದೇ ಭೂಮಿಯನ್ನು, ಕಟ್ಟಡವನ್ನು, ಸಾಧನ ಸಾಮಗ್ರಿಯನ್ನು ಅಥವಾ ಇತರ ಸೌಲಭ್ಯಗಳನ್ನು ಸ್ವೀಕರಿಸಿರುವ ಶಾಲೆಗಳಲ್ಲಿ ಶಿಕ್ಷಣ ಹಕ್ಕು ಕಾಯ್ದೆಯ ಸೆಕ್ಷನ್ 12(1)(ಸಿ) ಅಡಿ ಪ್ರವೇಶ ಪಡೆದು ಮಕ್ಕಳು ವ್ಯಾಸಂಗ ಮಾಡುತ್ತಿದ್ದರೆ ಅಂತಹ ಮಕ್ಕಳ ಶುಲ್ಕ ಮರುಪಾವತಿಯನ್ನು ಶಿಕ್ಷಣ ಹಕ್ಕು ಕಾಯ್ದೆ ಸೆಕ್ಷನ್ 12(2)ರಲ್ಲಿ ಸೂಚಿಸಿರುವಂತೆ ಕ್ರಮವಹಿಸುವುದು ಎಂದು ತಿಳಿಸಲಾಗಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳು/ಉಪನಿರ್ದೇಶಕರು ಶಾಲೆಗಳು ಸರ್ಕಾರದಿಂದ ಸೌಲಭ್ಯಗಳನ್ನು ಪಡೆದಿರುವ/ಪಡೆಯದೇ ಇರುವ ಬಗ್ಗೆ ಪರಿಶೀಲಿಸುವ ಸಲುವಾಗಿ ದಾಖಲೆಗಳನ್ನು ಕೇಳುತ್ತಿದ್ದು, ಇದರಿಂದಾಗಿ 2019-20ರ ಸಾಲಿನ ಶುಲ್ಕ ಮರುಪಾವತಿ ವಿಳಂಬವಾಗುತ್ತಿರುವುದು ಗಮನಕ್ಕೆ ಬಂದಿದೆ.

ಶಾಲೆಗಳು ಸಲ್ಲಿಸುವ ಸಂಬಂಧಿಸಿದ ದಾಖಲೆಗಳನ್ನು ಮಾತ್ರ ಪರಿಶೀಲಿಸುವುದು. ಯಾವುದೇ ಶಾಲೆಗೆ ಸರ್ಕಾರದಿಂದ ಮುಕ್ತವಾಗಿ ಭೂಮಿ ಅಥವಾ ಕಟ್ಟಡ ಅಥವಾ ಇತರೆ ಸೌಲಭ್ಯಗಳನ್ನು ಉಚಿತವಾಗಿ ನೀಡಿ ಮಕ್ಕಳಿಗೆ ಉಚಿತವಾಗಿ ಶಿಕ್ಷಣವನ್ನು ನೀಡಬೇಕೆಂದು ಷರತ್ತು ವಿಧಿಸಿದ್ದಲ್ಲಿ ಅಷ್ಟು ಪ್ರಮಾಣಕ್ಕೆ ಅನುಗುಣವಾಗಿ ಹೊಂದಿಕೆಯಾಗುವಂತೆ ಶುಲ್ಕ ಮರುಪಾವತಿಯಲ್ಲಿ ಕಟಾಯಿಸಲು ಕ್ರಮವಹಿಸುವುದು. ಕೋವಿಡ್-19ರ ಹಿನ್ನಲೆಯಲ್ಲಿ ಅನುದಾನ ರಹಿತ ಶಾಲೆಗಳು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಶಾಲೆಗಳು ದಾಖಲೆಗಳನ್ನು ಸಲ್ಲಿಸದ ಕಾರಣ ಶುಲ್ಕ ಮರುಪಾವತಿ ಪ್ರಕ್ರಿಯೆಯಲ್ಲಿ ವಿಳಂಬವಾಗದಂತೆ ಎಚ್ಚರವಹಿಸಲು ಈ ಮೂಲಕ ಸೂಚಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ